# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 366 |
| ಸದಸ್ಯರ ಹೆಸರು | : | ಶ್ರೀ ಅಪ್ಪಾಜಿಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 15.12.2021 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಜಿಲ್ಲೆಯಲ್ಲಿರುವ ಗೋಮಾಳಗಳ ಸಂಪೂರ್ಣ ಮಾಹಿತಿ ಸರ್ಕಾರಕ್ಕೆ ಇದೆಯೇ; (ಇದ್ದಲ್ಲಿ ಎಲ್ಲಾ ಗೋಮಾಳ ವಿವರ, ಅವುಗಳ ವಿಸ್ತೀರ್ಣದ ಮಾಹಿತಿಯನ್ನು ತಾಲೂಕುವಾರು ಮತ್ತು ಗ್ರಾಮಾವಾರು ನೀಡುವುದು) | ಹೌದು. ಮಂಡ್ಯ ಜಿಲ್ಲೆಯಲ್ಲಿರುವ ಗೋಮಾಳಗಳ ಒಟ್ಟು ವಿಸ್ತೀರ್ಣ 96652-24 ಎಕರೆ. ತಾಲ್ಲೂಕುವಾರು ಮತ್ತು ಗ್ರಾಮವಾರು ಪಟ್ಟಿಯನ್ನು ಅನುಬಂಧದಲ್ಲಿ ನೀಡಲಾಗಿದೆ. |
| (ಆ) | ಮಂಡ್ಯ ಜಿಲ್ಲೆಯಲ್ಲಿ ಗೋಮಾಳಗಳ ಅತಿಕ್ರಮಣ ಮತ್ತು ಗೋಮಾಳ ರದ್ದತಿಯ ಎಷ್ಟು ಪ್ರಕರಣಗಳು ದಾಖಲಾಗಿವೆ; ಇಂತಹ ಪ್ರಕರಣಗಳಿದ್ದಲ್ಲಿ, ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು: (ವಿವರ ನೀಡುವುದು) | ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಗೋಮಾಳ ಜಮೀನಿಗೆ ಸಂಬಂಧಿಸಿದಂತೆ 20,693 ಪ್ರಕರಣಗಳು ದಾಖಲಾಗಿರುತ್ತವೆ. ಗೋಮಾಳ ರದ್ದತಿಯ ಪ್ರಕರಣಗಳು ಯಾವುದೂ ಇರುವುದಿಲ್ಲ.<br>ಗೋಮಾಳ ಜಮೀನಿನಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 94 ಎ,94 ಬಿ ಮತ್ತು 94-ಎ(4)ರಡಿ ಹಾಗೂ ಕಲಂ 94 ಸಿ ಮತ್ತು 94 ಸಿಸಿ ರಡಿ ಸಲ್ಲಿಸಿರುವ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಸಕ್ರಮಗೊಳಿಸಲು ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. ಈ ಅರ್ಜಿಗಳನ್ನು ಹೊರತುಪಡಿಸಿ ಗೋಮಾಳ ಜಮೀನು ಒತ್ತುವರಿಯಾದಲ್ಲಿ ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 192-ಎ ರನ್ವಯ ಪ್ರಕರಣವನ್ನು ದಾಖಲಿಸಲಾಗುತ್ತಿದೆ. |

| | | |
|---|---|---|
| (೩) | ಸರ್ಕಾರವು ಗೋಮಾಳಗಳನ್ನು ನಿರ್ಮಾಣ ಮಾಡಿರುವ ಉದ್ದೇಶಗಳೇನು; ಈ ಉದ್ದೇಶಗಳು ಕಾರ್ಯರೂಪಕ್ಕೆ ತರಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಜಾನುವಾರುಗಳ ಮೇವಿಗಾಗಿ ಸರ್ಕಾರವು ಗೋಮಾಳಗಳನ್ನು ನಿರ್ಮಿಸಲಾಗಿರುತ್ತದೆ.<br>ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 97(1) ರಂತೆ "ಪ್ರತಿ ನೂರು ಜಾನುವಾರುಗಳಿಗೆ ಹನ್ನೆರಡು ಹೆಕ್ಟೇರುಗಳಂತೆ ಪ್ರತಿಯೊಂದು ಗ್ರಾಮದ ಜಾನುವಾರಿಗೂ ಸರ್ಕಾರಿ ಭೂಮಿಯನ್ನು ಉಚಿತ ಗೋಮಾಳವಾಗಿ ಪ್ರತ್ಯೇಕವಾಗಿ ಇಡಬೇಕಾಗಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ. |

(ಕಡತ ಸಂಖ್ಯೆ:ಕಂಇ 60 ಎಲ್‌ಜಿವೈ 2021)

(ಆರ್.ಅಶೋಕ)

ಕಂದಾಯ ಸಚಿವರು